**ಸುದ್ದಿ ಮತ್ತು ಪತ್ರಿಕಾ ಶಾಖೆ:**

ಸಮೂಹ ಮಾಧ್ಯಮಗಳನ್ನು 'opinion leaders' ಅಂದರೆ ಜನಾಭಿಪ್ರಾಯ ನಿರೂಪಕರು ಎಂದೇ ಪರಿಗಣಿಸಲಾಗುತ್ತದೆ. ಆದ್ದರಿಂದ ಸರ್ಕಾರದ ಯೋಜನೆಗಳನ್ನು ಈ ಮಾಧ್ಯಮಗಳ ಮೂಲಕ ಜನರಿಗೆ ತಲುಪಿಸುವುದರಿಂದ ಯೋಜನೆಯ ಕುರಿತು ಜನಾಭಿಪ್ರಾಯ ರೂಪಿಸಲು ಸಾಧ್ಯವಾಗುತ್ತದೆ, ಜೊತೆಗೆ ಜನರ ಪ್ರತಿಕ್ರಿಯೆಗಳನ್ನೂ ಸಹ ಪಡೆದುಕೊಂಡು ಸರ್ಕಾರ ತನ್ನ ಯೋಜನೆಯ ಸಾಧಕ ಬಾಧಕಗಳನ್ನು ನಿರ್ಧರಿಸಿ, ಮುಂದಿನ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗುತ್ತದೆ.

ಈ ಹಿನ್ನೆಲೆಯಲ್ಲಿ ಸುದ್ದಿ ಮತ್ತು ಪತ್ರಿಕಾ ಶಾಖೆಯು ಸರ್ಕಾರದ ಅಭಿವೃದ್ಧಿ ಚಟುವಟಿಕೆಗಳಿಗೆ ಸಂಬಂಧಿಸಿದ ಸುದ್ದಿಗಳನ್ನು ಪತ್ರಿಕಾ ಪ್ರಕಟಣೆಯ ರೂಪದಲ್ಲಿ ಬಿಡುಗಡೆ ಮಾಡುವುದು, ವಿಶೇಷ ಲೇಖನಗಳನ್ನು ಬಿಡುಗಡೆ ಮಾಡುವುದು. ಮುಖ್ಯಮಂತ್ರಿಗಳು, ಸಚಿವರು ಭಾಗವಹಿಸುವ ಸರ್ಕಾರದ ಅಭಿವೃದ್ಧಿಪರ ಕಾರ್ಯಕ್ರಮಗಳಿಗೆ ಪತ್ರಕರ್ತರನ್ನು ಕರೆದೊಯ್ಯುವ ಮೂಲಕ ವ್ಯಾಪಕ ಪ್ರಚಾರದ ವ್ಯವಸ್ಥೆ ಮಾಡುವ ಕೆಲಸವನ್ನು ನಿರ್ವಹಿಸುತ್ತದೆ.

ಇದಲ್ಲದೆ ಪತ್ರಕರ್ತರ (ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮ ಸೇರಿದಂತೆ) ಕಲ್ಯಾಣಕ್ಕಾಗಿ ಹಲವಾರು ಕಾರ್ಯಕ್ರಮಗಳನ್ನು ಸುದ್ದಿ ಮತ್ತು ಪತ್ರಿಕಾ ಶಾಖೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಅವುಗಳೆಂದರೆ:

· **ಮಾಧ್ಯಮ ಪ್ರತಿನಿಧಿಗಳಿಗೆ ಮಾನ್ಯತೆ:** ಕನಿಷ್ಠ 4 ವರ್ಷ ಸೇವೆ ಸಲ್ಲಿಸಿರುವ ಕಾರ್ಯನಿರತ ಪತ್ರಕರ್ತರಿಗೆ ಅಥವಾ 20 ವರ್ಷ ಕಾರ್ಯನಿರತ ಪತ್ರಕರ್ತರಾಗಿ ಸೇವೆ ಸಲ್ಲಿಸಿದ ಹವ್ಯಾಸಿ ಪತ್ರಕರ್ತರಿಗೆ ಇಲಾಖೆಯ ವತಿಯಿಂದ ಮಾನ್ಯತಾ ಪತ್ರ ನೀಡಲಾಗುತ್ತಿದೆ. ಪತ್ರಿಕಾ ಮಾನ್ಯತಾ ಸಮಿತಿಯು ಪತ್ರಕರ್ತರ ಅರ್ಹತೆಗಳನ್ನು ಪರಿಶೀಲಿಸಿ ಮಾನ್ಯತಾ ಪತ್ರ ನೀಡುವ ಬಗ್ಗೆ ನಿರ್ಧಾರ ಕೈಗೊಳ್ಳುವುದು.

· **ಮಾನ್ಯತೆ ಪಡೆದ ಪತ್ರಕರ್ತರಿಗೆ ಉಚಿತ ಬಸ್ ಪಾಸ್ (ಸ್ಮಾರ್ಟ್ ಕಾರ್ಡ್):** ಮಾನ್ಯತೆ ಪಡೆದ ಪತ್ರಕರ್ತರಿಗೆ ವರದಿಗಾರಿಕೆಗೆ ಅನುಕೂಲವಾಗುವಂತೆ ಕೆಎಸ್‌ಆರ್‌ಟಿಸಿಯ ಎಲ್ಲಾ ರೀತಿಯ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಕೂಲವಾಗುವಂತೆ ಬಸ್‌ಪಾಸ್ ನೀಡಲಾಗುತ್ತದೆ.

· **ಪತ್ರಕರ್ತರ ಮಾಸಾಶನ:** ಸಂಕಷ್ಟದಲ್ಲಿರುವ ಹಿರಿಯ ಪತ್ರಕರ್ತರಿಗೆ ಪ್ರತಿ ತಿಂಗಳು ರೂ. 8,000 ಮಾಸಾಶನ ನೀಡಲಾಗುತ್ತಿದೆ. ಅಂತಹ ಪತ್ರಕರ್ತರು ಮೃತಪಟ್ಟರೆ ಅವರ ಕುಟುಂಬಕ್ಕೆ ರೂ. 1000/- ಕುಟುಂಬ ಮಾಸಾಶನ ನೀಡಲಾಗುತ್ತಿದೆ. ಫಲಾನುಭವಿಗಳನ್ನು ನಿರ್ದೇಶಕರ ಅಧ್ಯಕ್ಷತೆಯ ಪತ್ರಕರ್ತರ ಮಾಸಾಶನ ಸಮಿತಿಯು ಆಯ್ಕೆ ಮಾಡುತ್ತದೆ.

- **ಕಾರ್ಯನಿರತ ಪತ್ರಕರ್ತರ ಕ್ಷೇಮಾಭಿವೃದ್ಧಿ ದತ್ತಿ ನಿಧಿ:** ಆಕಸ್ಮಿಕ ಅಪಘಾತ ಅಥವಾ ತೀವ್ರ ಅನಾರೋಗ್ಯದಿಂದಾಗಿ ಸಂಕಷ್ಟದಲ್ಲಿರುವ ಕಾರ್ಯನಿರತ ಪತ್ರಕರ್ತರ ಚಿಕಿತ್ಸೆಗೆ

ನೆರವಾಗಲು ಅಥವಾ ಮೃತಪಟ್ಟರೆ ಪರಿಹಾರ ನೀಡಲು ಈ ದತ್ತಿ ನಿಧಿಯನ್ನು ಸ್ಥಾಪಿಸಲಾಗಿದೆ. ನಿರ್ದೇಶಕರ ಅಧ್ಯಕ್ಷತೆಯ ದತ್ತಿ ಸಮಿತಿಯು ಫಲಾನುಭವಿಗಳನ್ನು ಆಯ್ಕೆ ಮಾಡುತ್ತದೆ.

· **ಹಿರಿಯ ಪತ್ರಕರ್ತರ ಕ್ಷೇಮಾಭಿವೃದ್ಧಿ ದತ್ತಿ ನಿಧಿ**: ಆಕಸ್ಮಿಕ ಅಪಘಾತ ಅಥವಾ ತೀವ್ರ ಅನಾರೋಗ್ಯದಿಂದಾಗಿ ಸಂಕಷ್ಟದಲ್ಲಿರುವ ಕಾರ್ಯನಿರತ ಪತ್ರಕರ್ತರ ಚಿಕಿತ್ಸೆಗೆ ನೆರವಾಗಲು ಅಥವಾ ಮೃತಪಟ್ಟರೆ ಪರಿಹಾರ ನೀಡಲು ಈ ದತ್ತಿ ನಿಧಿಯನ್ನು ಸ್ಥಾಪಿಸಲಾಗಿದೆ. ನಿರ್ದೇಶಕರ ದತ್ತಿ ಸಮಿತಿಯು ಫಲಾನುಭವಿಗಳನ್ನು ಆಯ್ಕೆ ಮಾಡುತ್ತದೆ.

- **ಪತ್ರಕರ್ತರ ಪ್ರಶಸ್ತಿಗಳು**: ಹಿರಿಯ ಪತ್ರಕರ್ತ ದಿ. ಟಿ.ಎಸ್. ರಾಮಚಂದ್ರರಾವ್ ಅವರ ನೆನಪಿನಲ್ಲಿ ಪತ್ರಿಕೋದ್ಯಮದಲ್ಲಿ ಗಮನಾರ್ಹ ಸಾಧನೆ ಮಾಡಿದ ಪತ್ರಕರ್ತರಿಗೆ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ, ಮಾಧ್ಯಮ ಸಂಸ್ಥೆಯನ್ನು ಕಟ್ಟಿ ಬೆಳೆಸಿದ ಪತ್ರಕರ್ತರಿಗೆ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ, ಪರಿಸರ ಮತ್ತು ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ಗುರುತರ ಸಾಧನೆ ಮಾಡಿದ ಪತ್ರಕರ್ತರಿಗೆ ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಮತ್ತು ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ನೀಡಲಾಗುತ್ತಿದೆ.

· **ರಾಜೀವ್ ಆರೋಗ್ಯ ಭಾಗ್ಯ**: ಕಾರ್ಯನಿರತ ಪತ್ರಕರ್ತರು ಮತ್ತು ಅವರ ಕುಟುಂಬ ವರ್ಗದವರಿಗೆ 'ರಾಜೀವ್ ಆರೋಗ್ಯ ಭಾಗ್ಯ' ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದ್ದು, ಈ ಯೋಜನೆಯಡಿ ಗಂಭೀರ ಕಾಯಿಲೆಗಳಿಂದ ಬಳಲುತ್ತಿರುವ ಎ.ಪಿ.ಎಲ್ ಕಾರ್ಡ್ ಹೊಂದಿರುವ ಪತ್ರಕರ್ತರ ಕುಟುಂಬದ ಸದಸ್ಯರುಗಳಿಗೆ ನೋಂದಾಯಿತ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ಒದಗಿಸಲಾಗುವುದು.

· **ಎಸ್‌ಸಿಎಸ್‌ಪಿ/ ಟಿಎಸ್‌ಪಿ ಯೋಜನೆ**: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಪತ್ರಿಕೋದ್ಯಮ/ವಿದ್ಯುನ್ಮಾನ ಮಾಧ್ಯಮ/ಸಮೂಹ ಸಂವಹನ ವಿಷಯಗಳಲ್ಲಿ ಪದವಿ/ ಸ್ನಾತಕ ಪದವಿ/ ಪಿಜಿ ಡಿಪ್ಲೊಮಾ ಪದವಿ ಪಡೆದಿರುವ ಅರ್ಹ ಅಭ್ಯರ್ಥಿಗಳಿಗೆ ಪತ್ರಿಕೋದ್ಯಮ ಕ್ಷೇತ್ರದಲ್ಲಿ ತೊಡಗಿಕೊಳ್ಳಲು ಅನುಕೂಲವಾಗುವಂತೆ ವೃತ್ತಿ ಹಾಗೂ ನಿರೂಪಣಾ ಕೌಶಲ್ಯ ತರಬೇತಿ ಹಾಗೂ ಲ್ಯಾಪ್‌ಟಾಪ್ ವಿತರಣೆ.

ಅಂಗೀಕೃತ ವಿಶ್ವವಿದ್ಯಾಲಯಗಳಲ್ಲಿ ಪತ್ರಿಕೋದ್ಯಮದಲ್ಲಿ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೊಮೊ ಇನ್ ಜರ್ನಲಿಸಂ, ಹಾಗೂ ಆಡಿಯೋ ವಿಷುಯಲ್ ಪದವಿ ಮತ್ತು ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ ಪಡೆದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ 7 ದಿವಸಗಳ ವೃತ್ತಿ ಮತ್ತು ನಿರೂಪಣಾ ಕೌಶಲ್ಯ ತರಬೇತಿ ಶಿಬಿರವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಏರ್ಪಡಿಸಲಿದೆ.

· **ಪತ್ರಕರ್ತರ ಮೇಲಿನ ಹಲ್ಲೆ ಕುರಿತು ಸಮಿತಿ**: ಹಲ್ಲೆ ಅಥವಾ ದೌರ್ಜನ್ಯಕ್ಕೆ ಒಳಗಾದ ಮಾಧ್ಯಮ ಪ್ರತಿನಿಧಿಗೆ ಪರಿಹಾರ ನೀಡಲು ಈ ಸಮಿತಿಯು ನೀಡುವ ವರದಿಯು ಪ್ರಮುಖವಾಗಿರುತ್ತದೆ. ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಸಮಿತಿಗಳು ಇದ್ದು, ಜಿಲ್ಲಾ

ಸಮಿತಿಗಳಲ್ಲಿ  ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿರುತ್ತಾರೆ. ಈ ಸಮಿತಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿಲ್ಲಾ ವಾರ್ತಾಧಿಕಾರಿಗಳು, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರು ಹಾಗೂ ಒಬ್ಬ ಕಾನೂನು ತಜ್ಞರನ್ನೊಳಗೊಂಡ ಸಮಿತಿ ಇರುತ್ತದೆ.

· **ಕೇಬಲ್ ನಿಯಂತ್ರಣ ಕಾಯ್ದೆ 1995:** ಖಾಸಗಿ ಟೆಲಿವಿಷನ್ ಚಾನಲ್‌ಗಳು ಹಾಗೂ ಕೇಬಲ್ ಚಾನಲ್‌ಗಳ ಕುರಿತು ಬರುವ ದೂರುಗಳನ್ನು ವಿಲೇವಾರಿ ಮಾಡಿ ಕ್ರಮಕೈಗೊಳ್ಳಲು ರಾಜ್ಯಮಟ್ಟದ ಹಾಗೂ ಜಿಲ್ಲಾ ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ.